ಕರ್ನಾಟಕ ಸರ್ಕಾರ ಕಾರ್ಮಿಕ ಇಲಾಖೆ

5 JUN 2007

ಸಂ: [illegible]/ಪಿಆರ್-26/06-07

ಕಾರ್ಮಿಕ ಆಯುಕ್ತರವರ ಕಛೇರಿ
ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ
ಬೆಂಗಳೂರು-29, ದಿನಾಂಕ: 11-4-2007

## ಸುತ್ತೋಲೆ

ವಿಷಯ: ಪರಿಶಿಷ್ಟ ಜಾತಿ/ಪಂಗಡಕ್ಕೆ ಸೇರಿದ ಬಾಲಕಾರ್ಮಿಕರ ಮಾಹಿತಿ ಒದಗಿಸುವ – ಪುನರ್ ವಸತಿ ಕಲ್ಪಿಸುವ ಬಗ್ಗೆ.

ಉಲ್ಲೇಖ:-ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಪರಿಶಿಷ್ಟ ಜಾತಿ/ಪಂಗಡದ ದೌರ್ಜನ್ಯ ತಡೆಯುವ ಬಗ್ಗೆ ಮಾಡಿರುವ ಶಿಫಾರಸ್ಸು.

*** *** ***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬಾಲಕಾರ್ಮಿಕ ಕಾಯ್ದೆ ಅಡಿಯಲ್ಲಿ ತನಿಖೆ ಮಾಡುವ ಸಮಯದಲ್ಲಿ ಪರಿಶಿಷ್ಟ ಜಾತಿ/ಪಂಗಡಕ್ಕೆ ಸೇರಿದ ಬಾಲಕಾರ್ಮಿಕರು ಕಂಡು ಬಂದಲ್ಲಿ ಅಂತಹ ಬಾಲಕಾರ್ಮಿಕರ ಪಟ್ಟಿ ಮಾಡುವುದು. ಈ ಪಟ್ಟಿಯನ್ನು ಸಮಾಜ ಕಲ್ಯಾಣ ಇಲಾಖೆಗೆ ರವಾನಿಸುತ್ತಾ ಆ ಇಲಾಖೆಯ ಕಾರ್ಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಸತಿ ನಿಲಯಗಳಲ್ಲಿ ಬಿಡುಗಡೆಗೊಂಡ ಬಾಲಕಾರ್ಮಿಕರಿಗೆ ವಸತಿ ಸೌಲಭ್ಯವನ್ನು ಆದ್ಯತೆ ಮೇರೆಗೆ ಒದಗಿಸಲು ಹಾಗು ಆ ಇಲಾಖೆಯು ಹಮ್ಮಿಕೊಂಡಿರುವ ವಿವಿಧ "ಬಡತನ ನಿರ್ಮೂಲನಾ ಯೋಜನಾ" ಕಾರ್ಯಕ್ರಮಗಳ ಅಡಿಯಲ್ಲಿನ ಸೌಲಭ್ಯಗಳನು ಈ ಬಾಲಕಾರ್ಮಿಕರುಗಳಿಗೆ ನೀಡುವಂತೆ ಆ ಇಲಾಖೆಯನ್ನು ಕೋರುವುದು.

ಇದಲ್ಲದೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗೂ ಸಹ ಪರಿಶಿಷ್ಟ ಜಾತಿ/ಪಂಗಡಕ್ಕೆ ಸೇರಿದ ಬಾಲಕಾರ್ಮಿಕರ ಪಟ್ಟಿಯನ್ನು ಕಳುಹಿಸುತ್ತಾ ಅವರ ಇಲಾಖೆಯ **'ಬಡತನ ನಿರ್ಮೂಲನಾ ಯೋಜನಾ'** ಅಡಿಯಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಸೌಲತ್ತುಗಳನ್ನು ಇವರಿಗೆ **ಆದ್ಯತೆ ಮೇರೆಗೆ ನೀಡುವಂತೆ ಕೋರಲು ಈ ಮೂಲಕ ಆದೇಶಿಸಲಾಗಿದೆ.** ಈ ಬಾಲಕಾರ್ಮಿಕರ ಪಟ್ಟಿಯನ್ನು ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ / ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಹಾಗೂ ಈ ಕಛೇರಿಗೂ ಸಹ ತಪ್ಪದೇ ಸಲ್ಲಿಸುವುದು.

ಈ ಸುತ್ತೋಲೆಯಲ್ಲಿ ತಿಳಿಸಿರುವ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ. ಈ ವಿಷಯದಲ್ಲಿ ಅಸಡ್ಡೆ ತೋರಿ ಯಾವುದೇ ಅಧಿಕಾರಿಗಳು ಕರ್ತವ್ಯಲೋಪವೆಸಗಿದ್ದಲ್ಲಿ, ಅವರ ವಿರುದ್ಧ ಶಿಸ್ತಿನ ಕ್ರಮಕೈಗೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

ಕರಡು ಪ್ರತಿಯನ್ನು ಕಾರ್ಮಿಕ ಆಯುಕ್ತರು ಅನುಮೋದಿಸಿದ್ದಾರೆ.
Draft approved by the
Commissioner of Labour.

S. [signature]
ಕಾರ್ಮಿಕ ಆಯುಕ್ತರು

ಗೆ:

ಎಲ್ಲಾ ಉಪ ಕಾರ್ಮಿಕ ಆಯುಕ್ತರು,
ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು,
ಎಲ್ಲಾ ಕಾರ್ಮಿಕ ಅಧಿಕಾರಿಗಳು
ಎಲ್ಲಾ ಹಿರಿಯ ಕಾರ್ಮಿಕ ನಿರೀಕ್ಷಕರು ಮತ್ತು ಕಾರ್ಮಿಕ ನಿರೀಕ್ಷಕರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು:-

ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮಾಹಿತಿಗಾಗಿ ಕಳುಹಿಸಲಾಗಿದೆ.

ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರ ಮಾಹಿತಿಗಾಗಿ ಕಳುಹಿಸಲಾಗಿದೆ.

ಎಲ್ಲಾ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ.